**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಸಿ.ಟಿ.ರವಿ ಇವರು ಪ್ರಸ್ತಾಪಿಸಿರುವ ಶೂನ್ಯವೇಳೆ ವಿಷಯಕ್ಕೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಉತ್ತರ .**

**ಪ್ರಶ್ನೆ:**

ಪ್ರಜಾವಾಣಿ ದಿನಪತ್ರಿಕೆಯಲ್ಲಿ ಪ್ರಕಟವಾಗಿರುವ ಸಾರಿಗೆ ನಿಗಮದ ನೌಕರರ ವೇತನ ಹೆಚ್ಚಳಕ್ಕೆ ಆಗ್ರಹ ಎಂದು ಪ್ರಕಟವಾಗಿರುವ ವರದಿಯ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ.

ನಾಲ್ಕು ಸಾರಿಗೆ ನಿಗಮಗಳ ನೌಕರರ ಬೇಡಿಕೆ ಈಡೇರಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಆಗ್ರಹಿಸಿದೆ. ನೌಕರರ ಹಿಂಬಾಕಿ ನೀಡುವುದು, ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕಳೆದ ಆಗಸ್ಟ್‌ನಲ್ಲಿ ಮುಷ್ಕರಕ್ಕೆ ಕರೆ ನೀಡಲಾಗಿತ್ತು. ಆದರೆ, ರಾಜ್ಯ ಉಚ್ಚ ನ್ಯಾಯಾಲಯದ ಸೂಚನೆಯ ಮೇರೆಗೆ ಮುಷ್ಕರ ಕೈಬಿಡಲಾಗಿತ್ತು. ಆ ನಂತರ ಮಾತುಕತೆ ನಡೆಸಿದರೂ 2024 ಜನವರಿ 1 ರಿಂದ ಅನ್ವಯವಾಗುವಂತೆ ವೇತನ ಪರಿಷ್ಕರಣೆ ಮಾಡಲು ಸರ್ಕಾರ ಒಪ್ಪಿಲ್ಲ. 39 ತಿಂಗಳ ಹಿಂಬಾಕಿ ನೀಡಬೇಕಿದ್ದು, 14 ತಿಂಗಳ ಹಿಂಬಾಕಿ ನೀಡಲಷ್ಟೇ ಒಪ್ಪಿದೆ. ಹಿಂಬಾಕಿ ಪೂರ್ಣ ನೀಡಬೇಕು. ಪ್ರತಿ ನಾಲ್ಕು ವರ್ಷಕ್ಕೊಮ್ಮೆ ವೇತನ ಪರಿಷ್ಕರಣೆ ಮಾಡಬೇಕು ಎಂಬ ಒಪ್ಪಂದ ಮುರಿಯಬಾರದು. ತಕ್ಷಣ ಶೇ. 25 ರಷ್ಟು ವೇತನ ಹೆಚ್ಚಳ ಮಾಡಿ 2024ರಿಂದಲೇ ಜಾರಿ ಮಾಡಬೇಕೆಂಬುದು ಪದಾಧಿಕಾರಿಗಳ ಒತ್ತಾಯವಾಗಿದ್ದು, ತಮ್ಮ ಈ ಬೇಡಿಕೆಗಳನ್ನು ಈಡೇರಿಸಲು ಕ್ರಮ ಕೈಗೊಳ್ಳದೇ ಇದ್ದರೆ ಅನಿವಾರ್ಯವಾಗಿ ಹೋರಾಟ, ಮುಷ್ಕರ ನಡೆಸಬೇಕಾಗುತ್ತದೆ ಎಂದು ಸಂಘಟನೆ ಸರ್ಕಾರಕ್ಕೆ ಎಚ್ಚರಿಕೆ ನೀಡಿದೆ.

ಅವರ ಈ ಎಲ್ಲಾ ಬೇಡಿಕೆಗಳ ಕುರಿತು ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಯಾವುದೇ ತೀರ್ಮಾನಕ್ಕೆ ಬರಲು ಸಾಧ್ಯವಾಗಿಲ್ಲ. ಈ ಹಿಂದೆ ಸಾರಿಗೆ ನಿಗಮಗಳ ನೌಕರರು ಮುಷ್ಕರ ನಡೆಸಿದಾಗ ಜನಸಾಮಾನ್ಯರು ತೀವ್ರ ತೊಂದರೆ ಅನುಭವಿಸಿದ್ದರು. ರಾಜ್ಯದಲ್ಲಿ ಮತ್ತೆ ಸಾರಿಗೆ ನೌಕರರ ಮುಷ್ಕರ ನಡೆದಲ್ಲಿ, ಪರ್ಯಾಯ ವ್ಯವಸ್ಥೆ ಮಾಡಲು ಸರ್ಕಾರಕ್ಕೆ ಅಸಾಧ್ಯವಾಗಲಿದೆ. ನೌಕರರು ನ್ಯಾಯಾಲಯದ ಸೂಚನೆ ಮೇರೆಗೆ ಮುಷ್ಕರ ಹಿಂಪಡೆದಿರುವುದನ್ನು ಸರ್ಕಾರ ಪರಿಗಣಿಸಬೇಕು. ಹಾಗೆಂದ ಮಾತ್ರಕ್ಕೆ ಅವರಿಗೆ ಅನ್ಯಾಯವಾಗಬಾರದು. ಆದ್ದರಿಂದ, ಸಾರಿಗೆ ನೌಕರರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೂಡಲೆ ಕ್ರಮ ಕೈಗೊಳ್ಳಬೇಕೆಂದು ಸರ್ಕಾರವನ್ನು ಆಗ್ರಹಿಸುತ್ತೇನೆ.

**ಉತ್ತರ:**

ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳ ಕಾರ್ಮಿಕ ಸಂಘಟನೆಗಳ ವಿವಿಧ ಬೇಡಿಕೆಗಳ ಬಗ್ಗೆ ಚರ್ಚಿಸಲು ಜಂಟಿ ಕ್ರಿಯಾ ಸಮಿತಿ ಕಾರ್ಮಿಕರ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ಸನ್ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ದಿನಾಂಕ:15.04.2025ರಂದು, 04.07.2025ರಂದು ಮತ್ತು 04.08.2025ರಂದು ಸಭೆಗಳನ್ನು ನಡೆಸಿ ಚರ್ಚಿಸಲಾಗಿರುತ್ತದೆ. ಆದಾಗ್ಯೂ ಜಂಟಿ ಕ್ರಿಯಾ ಸಮಿತಿಯವರು ದಿನಾಂಕ:05.08.2025 ರಿಂದ ಅನಿರ್ದಿಷ್ಟಾವಧಿ ಮುಷ್ಕರ ಹೂಡಿದ್ದು, ಮಾನ್ಯ ಉಚ್ಛ ನ್ಯಾಯಾಲಯವು WP No:23602/2025 (PIL)ರಲ್ಲಿ ದಿನಾಂಕ:04.08.2025 ರಂದು ನೀಡಿರುವ ಮಧ್ಯಂತರ ಆದೇಶದನ್ವಯ ಜಂಟಿ ಕ್ರಿಯಾ ಸಮಿತಿಯವರು ದಿನಾಂಕ:06.08.2025 ರಂದು ಮಾಧ್ಯಮ ಪ್ರಕಟಣೆಯ ಮೂಲಕ ಮುಷ್ಕರವನ್ನು ಕೈಬಿಟ್ಟಿರುತ್ತಾರೆ.

ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯವರು ಸಾರಿಗೆ ಸಂಸ್ಥೆ/ನಿಗಮಗಳ ಕಾರ್ಮಿಕರ ವಿವಿಧ ಬೇಡಿಕೆಗಳ ಈಡೇರಿಕೆಗಳಿಗಾಗಿ ಸುಮಾರು 7-8 ವರ್ಷಗಳಿಂದ ಬೇಡಿಕೆಗಳನ್ನು ಸಲ್ಲಿಸುತ್ತಾ ಬಂದಿದ್ದು, ದಿನಾಂಕ:24.01.2024ರಂದು ಸಲ್ಲಿಸಿರುವ ಜಂಟಿ ಕ್ರಿಯಾ ಸಮಿತಿಯ ಬೇಡಿಕೆಗಳನ್ನು **ಅನುಬಂಧ 'ಅ'** ರಲ್ಲಿ ನೀಡಲಾಗಿದೆ. ಈ ಹಿಂದೆ ನಡೆಸಲಾದ ಮುಷ್ಕರದಲ್ಲಿ ನೌಕರರ 9 ಬೇಡಿಕೆಗಳ ಪೈಕಿ 8 ಬೇಡಿಕೆಗಳನ್ನು ಈಡೇರಿಸಿದ್ದು, ವಿವರಗಳನ್ನು **ಅನುಬಂಧ-ಆ** ರಲ್ಲಿ ನೀಡಲಾಗಿದೆ.

ಮುಂದುವರೆದು, ದಿನಾಂಕ:26.11.2025ರಂದು ಮತ್ತೊಮ್ಮೆ ಮಾನ್ಯ ಮುಖ್ಯಮಂತ್ರಿಯವರ ನೇತೃತ್ವದಲ್ಲಿ ಸಭೆ ನಡೆಸಲಾಗಿದ್ದು, ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ನೇತೃತ್ವದಲ್ಲಿ ದಿನಾಂಕ:13.12.2025 ರಂದು ಎಲ್ಲಾ ಕಾರ್ಮಿಕ ಸಂಘಟನೆಯವರೊಂದಿಗೆ ಸಭೆ ನಡೆಸಿ, ಅವರ ಅಹವಾಲುಗಳನ್ನು ಪಡೆಯಲಾಗಿದೆ, ಸದರಿ ಅಹವಾಲುಗಳನ್ನು ಮಾನ್ಯ ಮುಖ್ಯಮಂತ್ರಿಯವರ ಅವಗಾಹನೆಗೆ ತಂದು ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದ ನಾಲ್ಕು ರಸ್ತೆ ಸಾರಿಗೆ ಸಂಸ್ಥೆಗಳಲ್ಲಿ ಮೇ 2023ರವರೆಗೆ ಒಟ್ಟು ರೂ.4099.38 ಕೋಟಿಗಳ ಹೊಣೆಗಾರಿಕೆ ಬಾಕಿ ಇದ್ದುದ್ದರಿಂದ (ಸಾಲದ ಬಾಕಿ ಹೊಣೆಗಾರಿಕೆ ಒಳಗೊಂಡಂತೆ), ಸದರಿ ಬಾಕಿಯು ನಿಗಮಗಳ ತೀವ್ರ ಆರ್ಥಿಕ ಹಿನ್ನೆಡೆಗೆ ಕಾರಣವಾಗಿತ್ತು. ನಿಗಮಗಳು ಇಂಧನ ಕಂಪನಿಗಳಿಗೆ ಇಂಧನದ ವೆಚ್ಚವನ್ನು, ಭವಿಷ್ಯ ನಿಧಿ ಮತ್ತು ಸರಬರಾಜುದಾರರ/ ಇತರೆ ಬಿಲ್ಲುಗಳನ್ನು ಪಾವತಿಸದೇ ಬಾಕಿಯಿರಿಸಿದ್ದರಿಂದ ನಿಗಮಗಳ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿತ್ತು.

**ಮೇ 2023 ರವರೆಗೆ ನಿಗಮವಾರು ಬಾಕಿಯಿದ್ದ ಹೊಣೆಗಾರಿಕೆಯ ವಿವರ ಕೆಳಕಂಡಂತಿದೆ:-**

(ರೂ. ಕೋಟಿಗಳಲ್ಲಿ)

| ನಿಗಮ/ ಸಂಸ್ಥೆ | ಬಾಕಿ ಹೊಣೆಗಾರಿಕೆ ಮೊತ್ತ |
|---|---|
| ಕ.ರಾ.ರ.ಸಾ.ನಿಗಮ | 1211.18 |
| ಬೆಂ.ಮ.ಸಾ.ಸಂಸ್ಥೆ | 1383.86 |
| ವಾ.ಕ.ರ.ಸಾ.ಸಂಸ್ಥೆ | 1253.01 |
| ಕ.ಕ.ರ.ಸಾ.ನಿಗಮ | 251.33 |
| **ಒಟ್ಟು** | **4099.38** |

ವರ್ಷವಾರು ಬಾಕಿ ವಿವರಗಳನ್ನು **ಅನುಬಂಧ-ಇ**ದಲ್ಲಿ ನೀಡಲಾಗಿದೆ.

ಅಲ್ಲದೇ, ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗೆ ಅಧಿಕಾರಿ/ನೌಕರರಿಗೆ ಕೈಗಾರಿಕಾ ಒಪ್ಪಂದದನ್ವಯ ನಾಲ್ಕು ವರ್ಷಗಳಿಗೊಮ್ಮೆ ಒಪ್ಪಂದವನ್ನು (ಅಗ್ರಿಮೆಂಟ್) ಪರಿಷ್ಕರಿಸಬೇಕಾಗಿರುತ್ತದೆ. ಅದರಂತೆ 2016ರಲ್ಲಿ ವೇತನ ಪರಿಷ್ಕರಣೆಯಾಗಿದ್ದು, ತದನಂತರ 2020ನೇ ವರ್ಷದಲ್ಲಿ ವೇತನ ಪರಿಷ್ಕರಣೆ ಮಾಡಬೇಕಾಗಿತ್ತು. ಆದರೆ, ಸರ್ಕಾರದ ಆದೇಶ ಸಂಖ್ಯೆ:ಟಿಡಿ 12 ಟಿಸಿಬಿ 2023, ದಿನಾಂಕ:17.03.2023ರಲ್ಲಿ ರಸ್ತೆ ಸಾರಿಗೆ ನಿಗಮಗಳ ಅಧಿನಿಯಮ 1950ರ ಸೆಕ್ಷನ್ 34(1)ರನ್ವಯ ದಿನಾಂಕ:01.03.2023ರಿಂದ ಜಾರಿಗೆ ಬರುವಂತೆ ನಾಲ್ಕು ಸಾರಿಗೆ ನಿಗಮಗಳು ಮತ್ತು ಪೂರ್ವ ಕಿಂಕೋ ಅಧಿಕಾರಿಗಳ/ ನೌಕರರೂ ಸೇರಿದಂತೆ ದಿನಾಂಕ:31.12.2019 ರಂದು ಪಡೆಯುತ್ತಿದ್ದ ಮೂಲ ವೇತನವನ್ನು ಶೇ.15ರಷ್ಟು ಹೆಚ್ಚಿಸಿ, ಅದರಂತೆ ವೇತನ ಶ್ರೇಣಿಗಳನ್ನು ಪರಿಷ್ಕರಿಸಿ ದಿನಾಂಕ:01.03.2023ರಿಂದ ಜಾರಿಗೊಳಿಸಲಾಗಿತ್ತು. **ಆದರೆ, ಸದರಿ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಅಧಿಕಾರಿ/ನೌಕರರಿಗೆ ವೇತನವನ್ನು ಪಾವತಿಸಲು ಆಯವ್ಯಯದಲ್ಲಿ ಯಾವುದೇ ಅನುದಾನವನ್ನು ಮೀಸಲಿರಿಸಿರಲಿಲ್ಲ ಹಾಗೂ ನಿಗಮಗಳಿಗೆ ಅನುದಾನ ಬಿಡುಗಡೆ ಮಾಡಿರಲಿಲ್ಲ. ಇದರಿಂದ, ನಿಗಮಗಳು ತೀವ್ರ ಒತ್ತಡಕ್ಕೆ ಸಿಲುಕಿದ್ದವು.**

ರಾಜ್ಯ ರಸ್ತೆ ಸಾರಿಗೆ ನಿಗಮಗಳು ರಸ್ತೆ ಸಾರಿಗೆ ನಿಗಮಗಳ ಕಾಯ್ದೆ-1950 (The Road Transport Corporation Act,1950) ರಡಿ ಅಸ್ತಿತ್ವಕ್ಕೆ ಬಂದಿರುವ ಸರ್ಕಾರಿ ಸ್ವಾಮ್ಯದ ಸ್ವಾಯತ್ತ ಸಂಸ್ಥೆ ಆಗಿರುತ್ತದೆ. ರಸ್ತೆ ಸಾರಿಗೆ ನಿಗಮಗಳ ನಿರ್ವಹಣೆ ಮತ್ತು ಸಿಬ್ಬಂದಿಗಳ ವೇತನ ಹಾಗೂ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು ನಿಗಮಗಳು ತನ್ನ ಆಂತರಿಕ ಮೂಲಗಳಿಂದಲೇ ಭರಿಸಬೇಕಾಗಿರುವುದು ಸಹ ನಿಗಮಗಳ ಆರ್ಥಿಕ ಸ್ಥಿತಿಗೆ ಕಾರಣವಾಗಿರುತ್ತವೆ.

ಮೇಲ್ಕಂಡ ಅಂಶಗಳನ್ನು ಗಮನಿಸಿ, ನಾಲ್ಕು ಸಾರಿಗೆ ಸಂಸ್ಥೆಗಳಿಗೆ ದಿನಾಂಕ:01.01.2020ರಿಂದ ದಿನಾಂಕ:28.02.2023 ರವರೆಗಿನ ಅವಧಿಯಲ್ಲಿ ಸೇವಾವಿಮುಕ್ತಿ ಹೊಂದಿದ ಅಧಿಕಾರಿ/ ನೌಕರರಿಗೆ ದಿನಾಂಕ:01.01.2020ರ ಪರಿಷ್ಕೃತ ವೇತನ ಶ್ರೇಣಿಯನ್ವಯ ಪಾವತಿಸಬೇಕಾದ ಉಪಧನ ಹಾಗೂ ಗಳಿಕೆ ರಜೆ

ನಗದೀಕರಣದ ವ್ಯತ್ಯಾಸ ಮೊತ್ತವಾದ 397500000ಒಟ್ಟು ರೂ.224.05 ಕೋಟಿಗಳನ್ನು ಸರ್ಕಾರದ ಆದೇಶ ಸಂಖ್ಯೆ: ಟಿಡಿ 72 ಟಿಸಿಬಿ 2024 (ಭಾ-1), ದಿನಾಂಕ:07.12.2024ರಲ್ಲಿ ನಿಗಮವಾರು ಈ ಕೆಳಕಂಡಂತೆ ಸರ್ಕಾರವು ಅನುದಾನದ ರೂಪದಲ್ಲಿ ಬಿಡುಗಡೆ ಮಾಡಲಾಗಿದೆ:-

**(ರೂ.ಕೋಟಿಗಳಲ್ಲಿ)**

| ಸಂಸ್ಥೆ | ಅನುದಾನ |
|---|---|
| ಕ.ರಾ.ರ.ಸಾ.ನಿಗಮ | 86.55 |
| ಬೆಂ.ಮ.ಸಾ.ಸಂಸ್ಥೆ | 50.25 |
| ವಾ.ಕ.ರ.ಸಾ.ಸಂಸ್ಥೆ | 51.50 |
| ಕ.ಕ.ರ.ಸಾ.ನಿಗಮ | 35.75 |
| **ಒಟ್ಟು** | **224.05** |

ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಿಗೆ ನವೆಂಬರ್-2024ರ ಅಂತ್ಯಕ್ಕೆ ಬಾಕಿ ಉಳಿಸಿಕೊಂಡಿರುವ ಶಾಸನಬದ್ಧ ಪಾವತಿಯಾದ ಭವಿಷ್ಯ ನಿಧಿ ಹಾಗೂ ಇಂಧನ ಬಾಕಿ ಮೊತ್ತ ಪಾವತಿಸಲು ಸರ್ಕಾರದ ಖಾತರಿ / ಗ್ಯಾರಂಟಿಯೊಂದಿಗೆ ಹಣಕಾಸು ಸಂಸ್ಥೆಗಳಿಂದ ರೂ.2000/- ಕೋಟಿ ಸಾಲ ಪಡೆದು ಈ ಕೆಳಕಂಡಂತೆ ನಿಗಮಗಳಿಗೆ ನೀಡಲಾಗಿದ್ದು, ಸದರಿ ಸಾಲದ ಮೊತ್ತವನ್ನು ಸಂಪೂರ್ಣವಾಗಿ ಸರ್ಕಾರವೇ ಮರು ಪಾವತಿಸುತ್ತದೆ.

**(ರೂ. ಕೋಟಿಗಳಲ್ಲಿ)**

| ಸಂಸ್ಥೆ/ನಿಗಮ | ಮೊತ್ತ |
|---|---|
| ಕ.ರಾ.ರ.ಸಾ.ನಿಗಮ | 623.80 |
| ಬೆಂ.ಮ.ಸಾ.ಸಂಸ್ಥೆ | 589.20 |
| ವಾ.ಕ.ರ.ಸಾ.ಸಂಸ್ಥೆ | 646.00 |
| ಕ.ಕ.ರ.ಸಾ.ನಿಗಮ | 141.00 |
| **ಒಟ್ಟು** | **2000.00** |

ನಾಲ್ಕು ಸಾರಿಗೆ ನಿಗಮಗಳ ನಗದು ಕೊರತೆಯನ್ನು ನಿಭಾಯಿಸಲು 2023-24 ಮತ್ತು 2024-25ನೇ ಸಾಲಿನಲ್ಲಿ ನಿಗಮಗಳು ಕ್ರಮವಾಗಿ ಸರ್ಕಾರಕ್ಕೆ ಪಾವತಿ ಮಾಡಬೇಕಾದ ಮೋಟಾರು ವಾಹನ ತೆರಿಗೆ ರೂ.581.47 ಕೋಟಿ ಮತ್ತು ರೂ.637.76 ಕೋಟಿ ಸೇರಿದಂತೆ ಒಟ್ಟು ರೂ.1219.23 ಕೋಟಿಗಳ ಪಾವತಿಯಿಂದ ವಿನಾಯಿತಿ ನೀಡಲಾಗಿದೆ.

2023ರ ಮೇ ತಿಂಗಳ ನಂತರ ದಿನನಿತ್ಯ ಡೀಸೆಲ್ ತೈಲ ಬೆಲೆ ಹೆಚ್ಚಳದೊಂದಿಗೆ ಸಿಬ್ಬಂದಿಗಳ ವೇತನ ಹೆಚ್ಚಳ, ವಾಹನ ಬಿಡಿ ಭಾಗಗಳ ವೆಚ್ಚ ಒಳಗೊಂಡಂತೆ ಒಟ್ಟು ಕಾರ್ಯಾಚರಣೆ ವೆಚ್ಚ ಹೆಚ್ಚಾಗಿ ನಿಗಮಗಳಿಗೆ ಹೆಚ್ಚಿನ ಆರ್ಥಿಕ ಹೊರೆಯುಂಟಾಗಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಕಾರ್ಮಿಕ ಸಂಘಟನೆಗಳ ಬೇಡಿಕೆಗಳನ್ನು ಅಧಿವೇಶನ ಮುಗಿದ ಬಳಿಕ ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಈ ಕುರಿತು ತೀರ್ಮಾನ ತೆಗೆದುಕೊಳ್ಳಲು ಪರಿಶೀಲಿಸಲಾಗುವುದು.

ಸಂಖ್ಯೆ: ಟಿಡಿ 281 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು